**ಶ್ರೀ ಮರಿತಿಬ್ಬೇಗೌಡ ಮಾನ್ಯ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 330 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ ಹಾಗೂ ಇನ್ನಿತರೆ ವಸತಿ ಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶ ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರು ಸೇರಿದಂತೆ ಸುಮಾರು 532 ಮಂದಿಗೆ ಕೋವಿಡ್-19 ಸಮಯದಲ್ಲಿ ಅಂದರೆ ಮಾರ್ಚ್-2020 ರಿಂದ ಇದುವರೆವಿಗೂ ವೇತನ ನೀಡಿರುವುದಿಲ್ಲ. ಸದರಿಯವರು ಅತೀವ ಆರ್ಥಿಕ ಸಂಕಷ್ಟದಲ್ಲಿರುವುದರಿಂದ ಈ ಗಂಭೀರ ಸಮಸ್ಯೆ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

****

**ಉತ್ತರ:-** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ ಹಾಗೂ ಇನ್ನಿತರೆ ವಸತಿ ಶಾಲೆ/ಕಾಲೇಜುಗಳಲ್ಲಿ ಅತಿಥಿ/ಹೊರಗುತ್ತಿಗೆ ಆಧಾರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಪ್ರತಿ ಶೈಕ್ಷಣಿಕ ವರ್ಷದ ಮಾರ್ಚ್ ಅಂತ್ಯಕ್ಕೆ ಬಿಡುಗಡೆಗೊಳಿಸಿ ಮುಂದಿನ ಶೈಕ್ಷಣಿಕ ವರ್ಷದ ಜೂನ್ ಮಾಹೆಯಿಂದ ಏಜೆನ್ಸಿ ಮುಖಾಂತರ ಜಿಲ್ಲಾ ಮಟ್ಟದಲ್ಲಿ ನೇಮಿಸಿಕೊಂಡು ವೇತನ ಪಾವತಿಸಲಾಗುತ್ತಿರುತ್ತದೆ.

ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲಾ/ಕಾಲೇಜುಗಳನ್ನು ಕ್ವಾರಂಟೈನ್ ಸೆಂಟರ್‌ಗಳಾಗಿ ಪರಿವರ್ತಿಸಿದ ಕಾರಣ, ಕ್ವಾರಂಟೈನ್/ ನಿರಾಶ್ರಿತರ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸಿದ ಹೊರಸಂಪನ್ಮೂಲ ಸಿಬ್ಬಂದಿಗಳಿಗೆ ಸರ್ಕಾರದ ಆದೇಶದನ್ವಯ ವೇತನವನ್ನು ನಿಯಮಾನುಸಾರ ಪಾವತಿ ಮಾಡಲಾಗಿದೆ.

2020-21 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುವ ಹಿನ್ನೆಲೆಯಲ್ಲಿ ಲಾಕ್‌ಡೌನ್ ಅಗಿದ್ದರಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆದೇಶದನ್ವಯ ವಸತಿ ಶಾಲೆ/ಕಾಲೇಜುಗಳನ್ನು ಪ್ರಾರಂಭಿಸಿರುವುದಿಲ್ಲ. ಆದ್ದರಿಂದ ಅತಿಥಿ/ಹೊರಸಂಪನ್ಮೂಲ ಏಜೆನ್ಸಿ ಮುಖಾಂತರ ಪಡೆಯುವ ಅತಿಥಿ/ಹೊರಸಂಪನ್ಮೂಲ ಸಿಬ್ಬಂದಿಯನ್ನು ಜೂನ್-2020 ರಿಂದ ನೇಮಕಾತಿ ಮಾಡಿಕೊಂಡಿರುವುದಿಲ್ಲ.

ಜೂನ್-2020 ರಿಂದ ಹೊರ ಸಂಪನ್ಮೂಲ ಶಿಕ್ಷಕರು/ಅತಿಥಿ ಶಿಕ್ಷಕರು ಹಾಗೂ ಬೋಧಕೇತರ ಸಿಬ್ಬಂದಿಗಳಿಗೆ ವೇತನ ಪಾವತಿಸಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ, ಶಾಲೆಗಳು/ ಕಾಲೇಜುಗಳು/ ವಸತಿ ನಿಲಯಗಳನ್ನು ಪೂರ್ಣವಾಗಿ ತೆರೆದ ನಂತರ ಕರ್ತವ್ಯ ನಿರ್ವಹಿಸುವ ಹೊರಸಂಪನ್ಮೂಲ ಸಿಬ್ಬಂದಿಗಳಿಗೆ ವೇತನ ಪಾವತಿಸಲು ಪರಿಗಣಿಸಲು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ. ಅದರಂತೆ ಕ್ರಮವಹಿಸಲಾಗುತ್ತಿದೆ.

ನವೆಂಬರ್-2020 ಮಾಹೆಯಿಂದ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆ/ಕಾಲೇಜುಗಳಿಗೆ ಹೊರ ಸಂಪನ್ಮೂಲ ಶಿಕ್ಷಕರು/ಅತಿಥಿ ಶಿಕ್ಷಕರು/ಅತಿಥಿ ಉಪನ್ಯಾಸಕರು ಹಾಗೂ ಬೋಧಕೇತರ ಸಿಬ್ಬಂದಿಗಳ ಸೇವೆಯನ್ನು ಪಡೆದು ನಿಯಮಾನುಸಾರ ವೇತನ ಪಾವತಿಸಲಾಗುತ್ತಿದೆ.

**ಕಡತ ಸಂಖ್ಯೆ: ಸಕಇ 21 ಮೊದೇಶಾ 2021**

(ಬಿ.ಶ್ರೀರಾಮುಲು)

**ಸಮಾಜ ಕಲ್ಯಾಣ ಇಲಾಖಾ ಸಚಿವರು.**